# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 98(301)

ಮಾನ್ಯ ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 01.02.2021

ಉತ್ತರಿಸುವ ಸಚಿವ : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಅನುದಾನಿತ ಶಾಲಾ ಕಾಲೇಜುಗಳಲ್ಲಿ 2015ನೇ ಸಾಲಿನವರೆಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಅನುಮತಿಯಂತೆ ಶಿಕ್ಷಣ ಇಲಾಖೆಯಿಂದ ಆರ್ಥಿಕ ಇಲಾಖೆಗೆ ಅನುಮೋದನೆಗಾಗಿ ಸಲ್ಲಿಕೆಯಾಗಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು; (ಪ್ರಾಥಮಿಕ, ಪ್ರೌಢ, ಪದವಿಪೂರ್ವ, ಪದವಿ ಕಾಲೇಜುಗಳ ವಿವರಗಳೊಡನೆ) | ಅನುದಾನಿತ ಶಾಲಾ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ 2015ನೇ ಸಾಲಿನವರೆಗೆ ನಿಧನ/ನಿವೃತ್ತಿ/ರಾಜೀನಾಮೆಯಿಂದ ತೆರವಾದ ಹುದ್ದೆಗಳಿಗೆ ಮಾತ್ರ ಸರ್ಕಾರವು ಆರ್ಥಿಕ ಮಿತವ್ಯಯ ಆದೇಶವನ್ನು ಸಡಿಲಿಸಿ ಪ್ರೌಢಶಾಲೆಯಲ್ಲಿ 882 ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಬೋಧಕ 388+ದೈಹಿಕ ಶಿಕ್ಷಣ ಶಿಕ್ಷಕರ 41 ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಲಾಗಿದೆ. ಅಂತಹ ಹುದ್ದೆಗಳನ್ನು ಮಾತ್ರ ಆಯುಕ್ತಾಲಯದ / ನಿರ್ದೇಶನಾಲಯದ ಹಂತದಲ್ಲಿ ಅನುಮೋದಿಸಲಾಗುತ್ತಿದೆ. ಇಲ್ಲಿಯವರೆಗೆ ಪ್ರೌಢಶಾಲೆಯಲ್ಲಿ ಒಟ್ಟು. 545 ಹುದ್ದೆಗಳನ್ನು ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಒಟ್ಟಾರೆ.173 ಹುದ್ದೆಗಳನ್ನು ಭರ್ತಿಮಾಡಲಾಗಿದ್ದು, ಉಳಿದ ಹುದ್ದೆಗಳನ್ನು ಭರ್ತಿಮಾಡಲು ಆರ್ಥಿಕ ಇಲಾಖೆಯ ಆದೇಶ ಸಂ: ಆಇ 157 ವೆಚ್ಚ-8/2020, ದಿನಾಂಕ:10.06.2020ರ ಪ್ರಕಾರ ತಾತ್ಕಾಲಿಕ ನಿರ್ಬಂಧವಿದೆ.<br>ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ 340 ಹುದ್ದೆಗಳನ್ನು ಭರ್ತಿ ಮಾಡಲು ಉನ್ನತ ಶಿಕ್ಷಣ ಇಲಾಖೆಯಿಂದ ಆರ್ಥಿಕ ಇಲಾಖೆಯ ಸಹಮತಿಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಉನ್ನತಶಿಕ್ಷಣ ಇಲಾಖೆಯು ತಿಳಿಸಿರುತ್ತದೆ. |

| | | |
|---|---|---|
| ಆ | ಸದರಿ ಕಡತಗಳಿಗೆ ಆರ್ಥಿಕ ಇಲಾಖೆ ಕೋವಿಡ್-19ರ ಆರ್ಥಿಕ ಮಿತವ್ಯಯದ ಅಡಿ ಅನುಮೋದನೆಗೆ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ | ಹಾಗಿದ್ದಲ್ಲಿ, ಸದರಿ ಮಿತವ್ಯಯವನ್ನು ಸಡಿಲಿಸಿ, ಶಿಕ್ಷಣ ಇಲಾಖೆಯಿಂದ ಬರುವ ಎಲ್ಲಾ ಪ್ರಸ್ತಾವನೆಗಳಿಗೂ ಯಾವ ಕಾಲಿಮಿತಿಯಲ್ಲಿ ಅನುಮೋದನೆ ನೀಡಲಾಗುವುದು? | ರಾಜ್ಯದ ಆರ್ಥಿಕ ಸ್ಥಿತಿಯು ಸುಸ್ಥಿತಿಗೆ ಬಂಧ ನಂತರ ಆರ್ಥಿಕ ಮಿತವ್ಯದ ಆದೇಶವನ್ನು ಹಿಂಪಡೆಯುವ ಬಗ್ಗೆ ಪರಿಶೀಲಿಸಲಾಗುವುದೆಂದು ಆರ್ಥಿಕ ಇಲಾಖೆಯು ತಿಳಿಸಿರುತ್ತದೆ. |

ಸಂ:ಇಪಿ 46 ಎಸ್‌ಇಎಸ್ 2021

(ಎಸ್. ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ

ಹಾಗೂ ಸಕಾಲ ಸಚಿವರು